**Akashvani : Bangalore**
**Regional Bulletin In Kannada**
**02.03.2026 / 14.30 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**02.03.2026 / 14.30 hrs**

**<><*<><>*><>**

ಮುಖ್ಯಾಂಶಗಳು

**೧. ಮಧ್ಯಪ್ರಾಚ್ಯ ರಾಷ್ಟ್ರಗಳಲ್ಲಿ ಉದ್ವಿಗ್ನ ಪರಿಸ್ಥಿತಿ; ದುಬೈ ಬಹ್ರೇನ್‌ನಲ್ಲಿ ಸಿಲುಕಿರುವ ರಾಜ್ಯದ ೧೦೯ ಮಂದಿ**

**೨. ವಿದೇಶಾಂಗ ಸಚಿವಾಲಯದ ಜೊತೆ ರಾಜ್ಯ ಸರ್ಕಾರ ನಿರಂತರ ಸಂಪರ್ಕ; ಕನ್ನಡಿಗರು ಭಯಪಡದಂತೆ ಮುಖ್ಯಮಂತ್ರಿ ಮನವಿ**

**೩. ಇರಾನ್-ಇಸ್ರೇಲ್ ಸಂಘರ್ಷ; ಕನ್ನಡಿಗರು ಸೇರಿದಂತೆ ಭಾರತೀಯರ ರಕ್ಷಣೆಗೆ ಕೇಂದ್ರ ಬದ್ಧ- ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ**

**೪. ಇನ್ನೆರಡು ದಿನಗಳಲ್ಲಿ ತಂಬಾಕು ಬೆಳೆಗಾರರ ಸಮಸ್ಯೆಗೆ ಪರಿಹಾರ- ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಭರವಸೆ**

**೫. ಕೊಡಗಿನಲ್ಲಿ ಆನೆ ದಾಳಿಗೆ ವಿದ್ಯಾರ್ಥಿನಿ ಬಲಿ; ಅರಣ್ಯ ಇಲಾಖೆ ಅಧಿಕಾರಿಗಳಿಂದ ಒಂಟಿ ಸಲಗದ ಕಾರ್ಯಾಚರಣೆ**

**<><*<><>*><>**

ಮಧ್ಯಪ್ರಾಚ್ಯ ರಾಷ್ಟ್ರಗಳ ಕೆಲವು ಭಾಗಗಳಲ್ಲಿ ಹೆಚ್ಚುತ್ತಿರುವ ಉದ್ವಿಗ್ನತೆಯನ್ನು ರಾಜ್ಯ ಸರ್ಕಾರ ಸೂಕ್ಷ್ಮವಾಗಿ ಗಮನಿಸುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ವಿದೇಶದಲ್ಲಿರುವ ಪ್ರತಿಯೊಬ್ಬ ಕನ್ನಡಿಗರ ಸುರಕ್ಷತೆ ಮತ್ತು ಯೋಗಕ್ಷೇಮ ಹೆಚ್ಚಿನ ಆದ್ಯತೆಯಾಗಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದಾರೆ. ಈವರೆಗಿನ ಮಾಹಿತಿ ಪ್ರಕಾರ, ವಿಮಾನಗಳ ಹಾರಾಟ ಸ್ಥಗಿತಗೊಂಡಿರುವುದರಿಂದ ಸುಮಾರು ನೂರು ಕನ್ನಡಿಗರು ಪ್ರಸ್ತುತ ಯುಎಇ ಹಾಗೂ ೯ ಮಂದಿ ಬಹ್ರೇನ್‌ನಲ್ಲಿ ಸಿಲುಕಿಕೊಂಡಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ. ರಾಜ್ಯ ಸರ್ಕಾರ, ವಿದೇಶಾಂಗ ಸಚಿವಾಲಯ, ನಾಗರಿಕ ವಿಮಾನಯಾನ ಸಚಿವಾಲಯ, ಭಾರತೀಯ ರಾಯಭಾರ ಕಚೇರಿಗಳು ಮತ್ತು ದೂತವಾಸ ಕಚೇರಿಗಳೊಂದಿಗೆ ನಿರಂತರ ಸಮನ್ವಯದಲ್ಲಿದೆ ಎಂದು ತಿಳಿಸಿದ್ದಾರೆ. ಸಂಕಷ್ಟಕ್ಕೆ ಸಿಲುಕಿದವರಲ್ಲಿ ಬಳ್ಳಾರಿಯ ೩೨, ಬೆಂಗಳೂರಿನ ೨೫, ದಾವಣಗೆರೆಯ ೯, ಕೊಡಗು, ವಿಜಯಪುರ, ಹಾಸನ ತಲಾ ನಾಲ್ವರು, ಶಿವಮೊಗ್ಗದ, ಉಡುಪಿ, ರಾಯಚೂರು, ದಕ್ಷಿಣಕನ್ನಡ ಜಿಲ್ಲೆಯ ತಲಾ ಮೂವರು ಸೇರಿದಂತೆ ಒಟ್ಟು ೧೦೯ ಮಂದಿ ಸೇರಿದ್ದಾರೆ.

**<><*<><>*><>**

ಪಶ್ಚಿಮ ಏಷ್ಯಾ ಹಾಗೂ ಕೊಲ್ಲಿ ರಾಷ್ಟ್ರಗಳಲ್ಲಿ ಸಿಲುಕಿರುವ ಕನ್ನಡಿಗರನ್ನು ಸುರಕ್ಷಿತವಾಗಿ ಕರೆತರುವಂತೆ ಹಾಗೂ ಅದಕ್ಕಾಗಿ ವಿಮಾನಯಾನ ಸೌಲಭ್ಯ ಕಲ್ಪಿಸುವಂತೆ ವಿದೇಶಾಂಗ ವ್ಯವಹಾರಗಳ ಸಚಿವಾಲಯಕ್ಕೆ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಪತ್ರ ಬರೆದಿದ್ದಾರೆ. ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಅವರಿಗೆ ಪತ್ರ ಬರೆದಿರುವ ಅವರು, ಪಶ್ಚಿಮ ಏಷ್ಯಾ ದೇಶಗಳಲ್ಲಿ ಉಂಟಾಗಿರುವ ಬಿಕ್ಕಟ್ಟಿನಿಂದ ಕನ್ನಡಿಗರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಕರ್ನಾಟಕ ಹಾಗೂ ವಿವಿಧ ರಾಜ್ಯಗಳ ಜನರನ್ನು ಆದ್ಯತೆ ಮೇಲೆ ತಾಯ್ನಾಡಿಗೆ ಕರೆತರಲು

ವ್ಯವಸ್ಥೆ ಮಾಡಬೇಕು ಎಂದು ಪತ್ರದಲ್ಲಿ ತಿಳಿಸಿದ್ದಾರೆ. ನಾಗರಿಕ ವಿಮಾನಯಾನ ಸಚಿವಾಲಯದ ಕಾರ್ಯದರ್ಶಿ ಸಮೀರ್ ಕುಮಾರ್ ಸಿನ್ಹಾ ಅವರಿಗೆ ಪತ್ರ ಬರೆದಿರುವ ಅವರು, ವಿಮಾನಗಳ ಕಾರ್ಯಾಚರಣೆ ಸಹಜ ಸ್ಥಿತಿಗೆ ಬರುತ್ತಿದ್ದಂತೆಯೇ ಕನ್ನಡಿಗರನ್ನು ಸುರಕ್ಷಿತವಾಗಿ ಕರೆತರುವಂತೆ ಮನವಿ ಮಾಡಿದ್ದಾರೆ.

**<><*<><>*><>**

ಮಧ್ಯಪ್ರಾಚ್ಯ ದೇಶಗಳಲ್ಲಿ ಸಂಘರ್ಷ ನಡೆಯುತ್ತಿರುವ ಹಿನ್ನಲೆಯಲ್ಲಿ  ವಿದೇಶಾಂಗ ಇಲಾಖೆಯ ಅಧಿಕಾರಿಗಳ ಜೊತೆ ನಿರಂತರ ಸಂಪರ್ಕದಲ್ಲಿದ್ದೇವೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ೧೦೯ ಮಂದಿ ಸಹಾಯವಾಣಿ  ಸಂಖ್ಯೆಗೆ ಕರೆ ಮಾಡಿ ಮಾಹಿತಿ ನೀಡಿದ್ದಾರೆ. ಏರ್‌ಟ್ರಾಫಿಕ್ ಸಮಸ್ಯೆ ಇತ್ಯರ್ಥಗೊಳ್ಳುತ್ತಿದ್ದಂತೆಯೇ ತಕ್ಷಣ ಕೇಂದ್ರ ಸರ್ಕಾರ ವಿಶೇಷ ವಿಮಾನದ ಮೂಲಕ ಕರೆತರಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

**ಧ್ವನಿ: ಕೃಷ್ಣ ಬೈರೇಗೌಡ ಕಂದಾಯ ಸಚಿವ (  ೪೧  ಸೆಕೆಂಡ್ಸ್)**

**<><*<><>*><>**

ಇರಾನ್-ಇಸ್ರೇಲ್ ಸಂಘರ್ಷದಲ್ಲಿ ಸಿಲುಕಿದ ಕನ್ನಡಿಗರು ಹಾಗೂ ಎಲ್ಲಾ ಭಾರತೀಯರ ರಕ್ಷಣೆಗೆ ಕೇಂದ್ರ ಸರ್ಕಾರ ಬದ್ಧವಾಗಿದೆ ಎಂದು ಕೇಂದ್ರ ಇಂಧನ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ.  ನವದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರ ಎಲ್ಲಾ ದೇಶಗಳ ರಾಯಭಾರಿಗಳೊಂದಿಗೆ ಮಾತುಕತೆ ನಡೆಸಿದ್ದು, ಎಲ್ಲರನ್ನೂ ಸುರಕ್ಷಿತವಾಗಿ ಕರೆತರಲು ಕ್ರಮ ತೆಗೆದುಕೊಳ್ಳಲಾಗುವುದು ಎಂದು ಹೇಳಿದ್ದಾರೆ. ವಿಶ್ವದ ಎಲ್ಲಿಯಾದರೂ ಭಾರತೀಯರ ಸುರಕ್ಷತೆ ಕೇಂದ್ರ ಸರ್ಕಾರದ ಪ್ರಮುಖ ಆದ್ಯತೆಯಾಗಿದೆ. ವಿದೇಶಗಳಲ್ಲಿರುವ ಕನ್ನಡಿಗರು ಭಯಬೀತರಾಗುವ ಅಗತ್ಯವಿಲ್ಲ ಎಂದು ಭರವಸೆ ನೀಡಿದ್ದಾರೆ.

**<><*<><>*><>**

ಮಧ್ಯ ಪ್ರಾಚ್ಯ ಹಾಗೂ ಕೊಲ್ಲಿ ದೇಶಗಳಲ್ಲಿ ಸಂಕಷ್ಟ ಎದುರಾಗಿರುವ ಹಿನ್ನಲೆಯಲ್ಲಿ ವಿದೇಶಾಂಗ ಇಲಾಖೆಯ ಸಹಾಯವಾಣಿಗಳಿಗೆ ಕರೆ ಮಾಡುವಂತೆ ಕಲಬುರಗಿ ಜಿಲ್ಲಾಧಿಕಾರಿ ಫೌಜಿಯಾ ತರನ್ನುಮ್ ತಿಳಿಸಿದ್ದಾರೆ. ಈ ಕುರಿತಂತೆ ಪತ್ರಿಕಾ ಪ್ರಕಟಣೆ ನೀಡಿರುವ ಅವರು ಮಧ್ಯಪ್ರಾಚ್ಯ ದೇಶಗಳಲ್ಲಿ ಪ್ರಸ್ತುತ ನೆಲೆಸಿರುವ ಕಲಬುರಗಿ ಜಿಲ್ಲೆಯ ನಿವಾಸಿಗಳು ಭಾರತೀಯ ರಾಯಭಾರ ಕಚೇರಿಗಳ ಸಹಾಯವಾಣಿ ಸಂಖ್ಯೆಗಳನ್ನು ಸಂಪರ್ಕಿಸಬೇಕು. ವಿದೇಶಾಂಗ ಇಲಾಖೆಯ ಸಾರಥಿ ಸಹಾಯತಾ ಪೋರ್ಟಲ್‌ನಲ್ಲಿ ನೋಂದಾಯಿಸಿಕೊಳ್ಳುವಂತೆ ಹಾಗೂ ಸರ್ಕಾರದ ಸೂಚನೆಗಳನ್ನು ಅನುಸರಿಸಲು ವಿನಂತಿಸಿದ್ದಾರೆ. ಜಿಲ್ಲಾ ವಿಪತ್ತು ನಿಯಂತ್ರಣ ಕೊಠಡಿ ದೂರವಾಣಿ ಸಂಖ್ಯೆ: ೦೮೪೭೨-೨೭೮೬೭೭ ಹಾಗೂ ಪೊಲೀಸ್ ಕಂಟ್ರೋಲ್ ಸಂಖ್ಯೆ: ೯೪೮೦೮-೦೫೫೦೦, ೯೪೮೦೮-೦೩೫೦೦ ಗೆ ಕರೆ ಮಾಡಿ ಮಾಹಿತಿ ನೀಡಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**<><*<><>*><>**

ಮಧ್ಯಪ್ರಾಚ್ಯದ ವಿವಿಧ ರಾಷ್ಟ್ರಗಳಲ್ಲಿ ಉಂಟಾಗಿರುವ ಉದ್ವಿಗ್ನ ಪರಿಸ್ಥಿತಿ ಹಾಗೂ ಅಂತಾರಾಷ್ಟ್ರೀಯ ವಿಮಾನಯಾನ ವ್ಯತ್ಯಯದಿಂದಾಗಿ ಸಂಕಷ್ಟಕ್ಕೆ ಸಿಲುಕಿರುವ ದಾವಣಗೆರೆ ಜಿಲ್ಲೆಯ ನಾಗರಿಕರ ನೆರವಿಗೆ ಜಿಲ್ಲಾಡಳಿತ ಧಾವಿಸಿದೆ. ಪ್ರಸ್ತುತ ಯುಎಇ ನಲ್ಲಿ ಸಿಲುಕಿರುವ ದಾವಣಗೆರೆ ಜಿಲ್ಲೆಯ ಎಂಟು ಮಂದಿ ಸುರಕ್ಷಿತವಾಗಿದ್ದಾರೆ ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದ್ದಾರೆ. ಮುಖ್ಯಮಂತ್ರಿ ಹಾಗೂ ಕಂದಾಯ ಸಚಿವರ ನಿರ್ದೇಶನದಂತೆ ಜಿಲ್ಲಾ ಮಟ್ಟದಲ್ಲಿ

ತುರ್ತು ಕಾರ್ಯಾಚರಣೆ ಕೇಂದ್ರವನ್ನು ೨೪ ಗಂಟೆಯೂ ಸಕ್ರಿಯಗೊಳಿಸಲಾಗಿದೆ. ಸಂಕಷ್ಟದಲ್ಲಿರುವವರು ಅಥವಾ ಅವರ ಕುಟುಂಬದ ಸದಸ್ಯರು ಮಾಹಿತಿಗಾಗಿ ಜಿಲ್ಲಾ ಸಹಾಯವಾಣಿ ಸಂಖ್ಯೆ: ೦೮೧೯೨-೨೩೪೦೩೪ ಅನ್ನು ಸಂಪರ್ಕಿಸಬಹುದಾಗಿದೆ ಎಂದು ಮಾಹಿತಿ ನೀಡಿದ್ದಾರೆ.

**<><*<><>*><>**

ಇನ್ನೆರಡು ದಿನಗಳಲ್ಲಿ ತಂಬಾಕು ಬೆಳೆಗಾರರ ಸಮಸ್ಯೆಗೆ ಪರಿಹಾರ ನೀಡಲಾಗುವುದು ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಭರವಸೆ ನೀಡಿದ್ದಾರೆ. ಮೈಸೂರಿನ ಭಾರತೀಯ ಭಾಷಾ ಸಂಸ್ಥೆಯಲ್ಲಿ ಇಂದು ಮೈಸೂರು ವಿಭಾಗದ ತಂಬಾಕು ಬೆಳೆಗಾರರ ಹಿತದೃಷ್ಟಿಯಿಂದ ಕೇಂದ್ರ ತಂಬಾಕು ಮಂಡಳಿ ಐಟಿಸಿ ಕಂಪನಿಗಳ ಹಿರಿಯ ಅಧಿಕಾರಿಗಳು ಹಾಗೂ ಪಶುಸಂಗೋಪನಾ ಸಚಿವ ಕೆ.ವೆಂಕಟೇಶ್ ಅವರೊಂದಿಗೆ ಎಚ್.ಡಿ.ಕುಮಾರಸ್ವಾಮಿ ಸುದೀರ್ಘ ಚರ್ಚೆ ನಡೆಸಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೈಸೂರು, ಹಾಸನ ಸೇರಿದಂತೆ ಇತರೆ ಭಾಗಗಳಲ್ಲಿ ರೈತರು ಬೆಳೆದ ತಂಬಾಕು ಖರೀದಿಯಾಗದೆ ಸಮಸ್ಯೆಗೆ ಒಳಗಾಗಿದ್ದಾರೆ, ಈ ಹಿನ್ನೆಲೆಯಲ್ಲಿ ಇಂದು ರೇಷ್ಮೆ ಮಂಡಳಿ ಹಾಗೂ ಐಟಿಸಿ ಕಂಪನಿಗಳಿಗೆ ತಂಬಾಕು ಖರೀದಿ ಮಾಡುವಂತೆ ಸಲಹೆ ಸೂಚನೆ ನೀಡಲಾಗಿದೆ, ಇದಕ್ಕೆ ಅಧಿಕಾರಿಗಳು ಸಹಮತ ವ್ಯಕ್ತಪಡಿಸಿದ್ದಾರೆ ಎಂದು ತಿಳಿಸಿದ್ದಾರೆ.

**<><*<><>*><>**

ಕೊಡಗು ಜಿಲ್ಲೆಯ ಮದೆನಾಡು ಗ್ರಾಮ ವ್ಯಾಪ್ತಿಯಲ್ಲಿ ಕಾಲೇಜು ವಿದ್ಯಾರ್ಥಿನಿ ಸಾವಿಗೆ ಕಾರಣವಾದ ಒಂಟಿ ಸಲಗದ ಸೆರೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕಾನೂನು ಸಲಹೆಗಾರ ಎ.ಎಸ್.ಪೊನ್ನಣ್ಣ ಸೂಚನೆ ನೀಡಿದ್ದಾರೆ. ಮೃತ ವಿದ್ಯಾರ್ಥಿನಿಯ ಮನೆಗೆ ಭೇಟಿ ನೀಡಿ  ಪೋಷಕರಿಗೆ ಧೈರ್ಯ ತುಂಬಿದ ಶಾಸಕರು, ವಿದ್ಯಾರ್ಥಿನಿಯ ಸಾವು ನೋವು ತಂದಿದೆ, ಸರ್ಕಾರದಿಂದ ಪರಿಹಾರ ನೀಡಲಾಗುವುದು ಎಂದು ಹೇಳಿದ್ದಾರೆ. ಒಂಟಿ ಸಲಗವನ್ನು ಸೆರೆ ಹಿಡಿಯಲು ಅರಣ್ಯ ಇಲಾಖೆ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಈ ಬಗ್ಗೆ ಅರಣ್ಯ ಸಚಿವರ ಜತೆ ಚರ್ಚಿಸಲಾಗಿದ್ದು, ಸೂಕ್ತ ಪರಿಹಾರ ಒದಗಿಸಲು ಮನವಿ ಮಾಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

**<><*<><>*><>**

ಬೆಂಗಳೂರು ಪೂರ್ವ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್, ನಾಳೆ ವಿವಿಧ ಕಚೇರಿಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲಿದ್ದಾರೆ. ಬಳಿಕ ಅವರು, ಸಾರ್ವಜನಿಕ ಸಂಪರ್ಕ ಸಭೆ ನಡೆಸಿ ನಾಗರಿಕರ ಅಹವಾಲುಗಳನ್ನು ಖುದ್ದಾಗಿ ಆಲಿಸಲಿದ್ದಾರೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಗೆ ಒಳಪಡುವ ಬೆಂಗಳೂರು ಕೇಂದ್ರ ನಗರ ಪಾಲಿಕೆಯಲ್ಲಿ ಈಗಾಗಲೇ ಸಾರ್ವಜನಿಕ ಸಂಪರ್ಕ ಸಭೆ ನಡೆಸಲಾಗಿದ್ದು, ಅದಕ್ಕೆ ಸಕಾರಾತ್ಮಕ ಸ್ಪಂದನೆ ವ್ಯಕ್ತವಾಗಿದೆ.  ಇದೇ ೫ ರಂದು ಪಶ್ಚಿಮ ನಗರ ಪಾಲಿಕೆ, ಇದೇ ೧೦ ರಂದು ಉತ್ತರ ನಗರ ಪಾಲಿಕೆ ಹಾಗೂ ಇದೇ ೧೨ ರಂದು ದಕ್ಷಿಣ ನಗರ ಪಾಲಿಕೆಗಳಲ್ಲಿ ಸಾರ್ವಜನಿಕರ ಅಹವಾಲುಗಳು ಮತ್ತು ಮನವಿಗಳನ್ನು ನೇರವಾಗಿ ಸ್ವೀಕರಿಸಲಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**